155-B-5

5

32

05/03/2025

**<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ ರವರು ಸಮಾನ ಕರ್ತವ್ಯಕ್ಕೆ ಸಮಾನ ವೇತನ ಎಂಬ ನಿಯಮವನ್ನೇ ಮುಜರಾಯಿ ಇಲಾಖೆ ಮರೆತ ಪರಿಣಾಮ, ರಾಜ್ಯಾದ್ಯಂತ ಎರಡೂವರೆ ಸಾವಿರ ದೇವಾಲಯಗಳ ನೌಕರರು ವೇತನ ತಾರತಮ್ಯಕ್ಕೆ ಒಳಗಾಗಿ ಬದುಕು ಸವೆಸಲು ಹೆಣಗಾಡುತ್ತಿದ್ದಾರೆ.</u>**

**<u>ಒಂದೇ ಇಲಾಖೆ, ಒಂದೇ ಸ್ಥಳ ಹಾಗೂ ಒಂದೇ ಕೆಲಸ ಮಾಡುವ ಉದ್ಯೋಗಿಗಳ ನಡುವೆ ಸುಮಾರು 25 ರಿಂದ 30 ಸಾವಿರ ರೂ. ವೇತನ ತಾರತಮ್ಯವಿದ್ದು, ಇದನ್ನು ಸರಿಪಡಿಸಲು ಸರ್ಕಾರ ಇದುವರೆಗೆ ಯಾವುದೇ ಕ್ರಮವಹಿಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ನಿಯಮ 72 ರಡಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಹೇಳಿಕೆ.</u>**

**<u>ಉತ್ತರ</u>** :-

- ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997 ಮತ್ತು ನಿಯಮಗಳು 2002ರಡಿಯಲ್ಲಿ ದೇವಾಲಯದ ಅರ್ಚಕರು ಮತ್ತು ನೌಕರರು ಸರ್ಕಾರದ ನೌಕರರಾಗಿರುವುದಿಲ್ಲ ಮತ್ತು ಇವರಿಗೆ ಸರ್ಕಾರಿ ನೌಕರರಿಗೆ ಲಭ್ಯವಿರತಕ್ಕ ವೇತನ ಮತ್ತು ಭತ್ಯೆಗಳ ಸಂಪೂರ್ಣ ಸೌಲಭ್ಯಗಳನ್ನು ನೀಡಲು ಕಾಯ್ದೆಯಲ್ಲಿ ಅವಕಾಶ ಇರುವುದಿಲ್ಲ.
- ಆದರೆ, ದೇವಾಲಯದ ನೌಕರರಿಗೆ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997 ಮತ್ತು ನಿಯಮಗಳು 2002ರ ನಿಯಮ 8(2) ರಡಿಯಲ್ಲಿ ವೇತನ ನಿಗಧಿಪಡಿಸಲು ಅವಕಾಶ ಕಲ್ಪಿಸಲಾಗಿದ್ದು ಅದರಂತೆ ವೇತನ ನಿಗಧಿಪಡಿಸಲಾಗುತ್ತಿದೆ..
- ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997ರ ಸೆಕ್ಷನ್ 36(2) ರಂತೆ ದೇವಾಲಯದ ಸಿಬ್ಬಂದಿ ವೆಚ್ಚವು ಒಟ್ಟು ವಾರ್ಷಿಕ ಆದಾಯದ ಶೇಕಡ 35 ಅನ್ನು ಮೀರಬಾರದು ಎಂದಿರುತ್ತದೆ. ಆದ್ದರಿಂದ, ಈ ಮಿತಿಯೊಳಗೆ ದೇವಾಲಯದ ನೌಕರರ ವೇತನವನ್ನು ನಿಗಧಿಪಡಿಸಬೇಕಾಗಿರುತ್ತದೆ.
- ಸರ್ಕಾರದ ಆದೇಶ ಸಂಖ್ಯೆ: ಕಂ ಇ 56 ಮುಸೇವಿ 2018, ದಿನಾಂಕ:18.10.2021ರ ಆದೇಶದಲ್ಲಿ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಕಾಯ್ದೆ 1997 ಮತ್ತು ನಿಯಮಗಳು 2002 ದಿನಾಂಕ:01.05.20003ರ ಮೂಲ ಕಾಯ್ದೆ ಹಾಗೂ ತಿದ್ದುಪಡಿ ಕಾಯ್ದೆ 2012 ದಿನಾಂಕ:27.01.2012 ರಂದು ಜಾರಿಗೆ ಬರುವ ಮುಂಚಿತವಾಗಿ ಸರ್ಕಾರಿ ವೇತನ ಶ್ರೇಣಿಯನ್ನು ಪಡೆದು ಕರ್ತವ್ಯ ನಿರ್ವಹಿಸುತ್ತಿದ್ದ ನೌಕರರು/ಅರ್ಚಕರುಗಳಿಗೆ ಕಾಲ ಕಾಲಕ್ಕೆ ಸರ್ಕಾರಿ ವೇತನ ಶ್ರೇಣಿಗೆ ಸಮನಾದ ವೇತನ ಶ್ರೇಣಿಯನ್ನು ಮಂಜೂರು ಮಾಡಲಾಗಿರುತ್ತದೆ.
- ಸರ್ಕಾರದ ಆದೇಶ ಸಂಖ್ಯೆ:ಕಂಇ 54 ಮುಸೇವಿ 2017 ದಿನಾಂಕ:17.07.2019 ರಲ್ಲಿ ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಗೆ ಒಳಪಡುವ ಅಧಿಸೂಚಿತ ದೇವಾಲಯ / ಸಂಸ್ಥೆಗಳಲ್ಲಿ ವೇತನ ಶ್ರೇಣಿ ನಿಗದಿಯಾಗದೇ ಕರ್ತವ್ಯ ನಿರ್ವಹಿಸುತ್ತಿರುವ ಬಾಕಿ ಉಳಿದ ದೇವಾಲಯದ ನೌಕರರು ತಾತ್ಕಾಲಿಕ ನೆಲೆಯಲ್ಲಿ ಅಂದರೆ ಸಂಚಿತ, ಓಚರ್, ಎನ್.ಎಂ.ಆರ್, ದಿನಗೂಲಿ, ಹಂಗಾಮಿ, ನಿಗಧಿತ ವೇತನ, ಕಾರ್ಯಾರ್ಥ ಏರ್ಪಾಟು ಈರೀತಿ ಯಾವುದೇ ನೇಮಕಾತಿಯಾಗಿರಲಿ ಅವರು ವೇತನವನ್ನು ಅಥವಾ ಗೌರವ ಧನದ ರೂಪದಲ್ಲಿ ವೇತನ ಪಡೆಯುತ್ತಿರುವ ದೇವಾಲಯದ ನೌಕರರುಗಳಿಗೆ

ನೇಮಕಾತಿ ವಿಧಾನಗಳನ್ನು ಇನ್ನು ಮುಂದೆ ಅನುಸರಿಸದಂತೆ ಹಾಗೂ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ನಿಯಮಗಳು 2002 ರ ನಿಯಮ 12 ಹಾಗೂ ತಿದ್ದುಪಡಿ ನಿಯಮಗಳ ನೇಮಕಾತಿ ವಿಧಾನವನ್ನು ಕಡ್ಡಾಯವಾಗಿ ಪಾಲಿಸುವ ಷರತ್ತಿಗೊಳಪಟ್ಟು ಒಂದು ಭಾರಿಯ ಕ್ರಮವಾಗಿ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ನಿಯಮಗಳು 2019ರ ನಿಯಮ 8ರ ಕೋಷ್ಟಕದಲ್ಲಿನ ವೇತನ ಶ್ರೇಣಿ ಮತ್ತು ಇತರೆ ಭತ್ಯೆಗಳನ್ನು ದಿನಾಂಕ:17.07.2019 ರಿಂದ ಜಾರಿಗೆ ಬರುವಂತೆ ಕೆಲವು ಷರತ್ತುಗಳನ್ನು ವಿಧಿಸಿ ಆದೇಶವನ್ನು ಹೊರಡಿಸಲಾಗಿರುತ್ತದೆ.

- ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಇಲಾಖೆಯ ಕಾಯ್ದೆ ಮತ್ತು ನಿಯಮಗಳು ಜಾರಿಗೆ ಬರುವ ಪೂರ್ವದಲ್ಲಿಯೇ ಸರ್ಕಾರಿ ವೇತನ ಶ್ರೇಣಿಯನ್ನು ಪಡೆದು ಕರ್ತವ್ಯ ನಿರ್ವಹಿಸುತ್ತಿದ್ದ ಕೆಲವು ದೇವಾಲಯದ ನೌಕರರ ವೇತನಕ್ಕೂ ಹಾಗೂ ವೇತನ ಶ್ರೇಣಿ ನಿಗದಿಯಾಗದೇ ಕರ್ತವ್ಯ ನಿರ್ವಹಿಸುತ್ತಿರುವ ಬಾಕಿ ಉಳಿದ ದೇವಾಲಯದ ನೌಕರರು ತಾತ್ಕಾಲಿಕ ನೆಲೆಯಲ್ಲಿ ಅಂದರೆ ಸಂಚಿತ, ಓಚರ್, ಎನ್.ಎಂ.ಆರ್, ದಿನಗೂಲಿ, ಹಂಗಾಮಿ, ನಿಗಧಿತ ವೇತನ, ಕಾರ್ಯಾರ್ಥ ಏರ್ಪಾಟು ಈ ರೀತಿ ಕರ್ತವ್ಯ ನಿರ್ವಹಿಸುತ್ತಿದ್ದ ನೌಕರರಿಗೂ ವೇತನ ತಾರತಮ್ಯ ಇರುತ್ತದೆ.
- ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ನಿಯಮಗಳು 2019ರ ನಿಯಮ 8ರ ಕೋಷ್ಟಕದಲ್ಲಿನ ವೇತನ ಶ್ರೇಣಿ ಮತ್ತು ಇತರೆ ಭತ್ಯೆಗಳನ್ನು ಪಡೆದು ಕರ್ತವ್ಯ ನಿರ್ವಹಿಸುತ್ತಿರುವ ದೇವಾಲಯದ ಅರ್ಚಕರು/ನೌಕರರು ತಮಗೂ ಸಹ ಸರ್ಕಾರಿ ವೇತನ ಶ್ರೇಣಿ ನಿಗಧಿಪಡಿಸುವಂತೆ ಬೇಡಿಕೆ ಸಲ್ಲಿಸಿರುವ ಕಾರಣದಿಂದ ದೇವಾಲಯದ ಅರ್ಚಕರು/ನೌಕರರ ವೇತನ ತಾರತಮ್ಯವನ್ನು ಸರಿಪಡಿಸಲು ಸುದೀರ್ಘವಾಗಿ ಚರ್ಚಿಸಿ ನಿವೃತ್ತ ನ್ಯಾಯಾಧೀಶರನ್ನು ಒಳಗೊಂಡಂತೆ ಒಂದು ಸಮಿತಿಯನ್ನು ರಚಿಸಿ, ಆಮೂಲಾಗ್ರವಾಗಿ ಪರಿಶೀಲಿಸಿ ವರದಿ ಪಡೆದು ವೇತನ ತಾರತಮ್ಯವನ್ನು ಸರಿಪಡಿಸಲು ಕ್ರಮವಹಿಸುವಂತೆ ಸೂಚನೆ ನೀಡಿರುವ ಮೇರೆಗೆ ನಿವೃತ್ತ ನಾಯಾಧೀಶರನ್ನೊಳಗೊಂಡಂತೆ ಒಂದು ಸಮಿತಿಯನ್ನು ರಚಿಸುವ ಬಗ್ಗೆ ಕ್ರಮ ವಹಿಸಲಾಗುತ್ತಿದೆ.

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು

(ಸಂಖ್ಯೆ:ಕಂಇ 07 ಮುಸಪ್ರ 2025)